# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

### ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:05ನೇ ಮಾರ್ಚ್, 2025**
**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಹೇಮಲತಾ ನಾಯಕ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 08(82) | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ವರದಿಯನ್ನೊಪ್ಪಿಸುವುದು

**ಶ್ರೀ ಪುಟ್ಟಣ್ಣ (ಸದಸ್ಯರು, ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿ)** ಅವರು 2024ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನೊಪ್ಪಿಸುವುದು.

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ

"2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:04.03.2025ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

ಎರಡನೇ ದಿನ

..2..

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯಾದ್ಯಂತ ಎರಡೂವರೆ ಸಾವಿರ ದೇವಾಲಯಗಳ ನೌಕರರುಗಳು ವೇತನ ತಾರತಮ್ಯಕ್ಕೆ ಒಳಗಾಗಿರುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಗೋವಿಂದ ರಾಜು** ಅವರು ಕರ್ನಾಟಕ ರಾಜ್ಯದಲ್ಲಿ ಕುಡಿಯಲು ಮತ್ತು ಕೃಷಿಗೆ ಬಳಸುತ್ತಿರುವ ಕೊಳವೆ ಬಾವಿಗಳ ಅಂತರ್‌ಜಲದಲ್ಲಿ ನೈಟ್ರೇಟ್ ಮತ್ತು ಫ್ಲೋರೈಡ್ ಅಂಶ ಸಾಮಾನ್ಯಕ್ಕಿಂತ ಹೆಚ್ಚಾಗಿ ಪತ್ತೆಯಾಗಿರುವುದರಿಂದ ಪರಿಸರ ಮತ್ತು ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟು ಮಾಡಿರುವ ಕುರಿತು ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್(ನಿ)ರಲ್ಲಿ 2017-2018 ರಿಂದ 2023-2024ರ ಅವಧಿಯಲ್ಲಿ ನಡೆದಿರುವ ಅವ್ಯವಹಾರ ಮತ್ತು ಹಣ ದುರುಪಯೋಗ ಪ್ರಕರಣಗಳನ್ನು ಲೋಕಾಯುಕ್ತದಿಂದ ತನಿಖೆ ನಡೆಸಿ ಬ್ಯಾಂಕಿನ ಆರ್ಥಿಕ ಸುಸ್ಥಿತಿಗೆ ಕ್ರಮವಹಿಸುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

೦4. **ಡಾ: ಧನಂಜಯ ಸರ್ಜಿ** ಅವರು ಶೈಕ್ಷಣಿಕ ವರದಿಗಳ ಪ್ರಕಾರ ಕಲಿಕೆಯಲ್ಲಿ ಹಿಂದುಳಿಯುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚುತ್ತಿರುವುದನ್ನು ತಡೆಗಟ್ಟಲು ಸರ್ಕಾರದ ನೀತಿ ಹಾಗೂ ತೆಗದುಕೊಳ್ಳಬೇಕಾಗಿರುವ ಕ್ರಮಗಳ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಸಿ.ಟಿ. ರವಿ, ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಇತರರು** ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿರುವ ಕೆ.ಎ.ಎಸ್. ಪರೀಕ್ಷೆಯಲ್ಲಿ ಆಗುತ್ತಿರುವ ತಪ್ಪುಗಳಿಂದಾಗಿ ಅಭ್ಯರ್ಥಿಗಳು ಅತಂಕಕ್ಕೀಡಾಗಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ತಿಪ್ಪಣ್ಣಪ್ಪ ಕಮಕನೂರ, ಡಾ: ತಳವಾರ್ ಸಾಬಣ್ಣ, ಬಸನಗೌಡ ಬಾದರ್ಲಿ, ಹೆಚ್.ಪಿ. ಸುಧಾಮ್ ದಾಸ್, ಶ್ರೀ ಎ. ವಸಂತ್ ಕುಮಾರ್ ಹಾಗೂ ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರುಗಳು ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ವಿಧಾನಸೌಧದ ಮುಂದೆ ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**